# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರದಿಂದ ಉನ್ನತೀಕರಿಸಿದ 15 ಪ್ರೌಢ ಶಾಲೆಗಳಿಗೆ ವೇತನ ಸೆಳೆಯಲು ವೇತನ ಬಟವಾಡೆ ಅಧಿಕಾರವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಪ್ರತ್ಯಾಯೋಜಿಸುವ ಬಗ್ಗೆ.

**ಓದಲಾಗಿದೆ :**
1. ಸರ್ಕಾರದ ಆದೇಶ ಸಂಖ್ಯೆ: ಇಪಿ 211 ಎಸ್‌ಓಹೆಚ್ 2024, ದಿನಾಂಕ:25.04.2025.
2. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರದ ಸಂಖ್ಯೆ:DPI-CPI0C4-1(EXHS)/6/2023/E-1179048,ದಿನಾಂಕ:20.03.2026

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ. (1) ರ ಆದೇಶದಲ್ಲಿ ಶಾಲಾ ಶಿಕ್ಷಣ ಇಲಾಖೆಯಿಂದ 17 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (2) ರ ಪತ್ರದಲ್ಲಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಶಾಲಾ ಶಿಕ್ಷಣ ಇಲಾಖೆಯಿಂದ 17 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ. ಸದರಿ ಶಾಲೆಗಳ ಪೈಕಿ ಬಾಗಲಕೋಟೆ ಜಿಲ್ಲೆಯ ಪೆಟ್ಲೂರ್ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಹಾವೇರಿ ಜಿಲ್ಲೆಯ ಅರಳಿಕಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಹೊರತುಪಡಿಸಿ, ಉಳಿದ 15 ಶಾಲೆಗಳನ್ನು ಪ್ರಾರಂಭಿಸಲು ಅನುಮತಿಸಲಾಗಿರುತ್ತದೆ. ಈ ಉನ್ನತೀಕರಿಸಿದ 15 ಪ್ರೌಢ ಶಾಲೆಗಳಿಗೆ ಇಲಾಖಾ ಮುಖ್ಯಸ್ಥರ ಹಂತದಲ್ಲಿ ಸದರಿ ಶಾಲೆಗಳಿಗೆ ಹುದ್ದೆಗಳನ್ನು ಮಂಜೂರಾತಿ ಮಾಡಲಾಗಿದೆ. ಪ್ರಯುಕ್ತ, ಸದರಿ ಶಿಕ್ಷಕರುಗಳು ಸಾಮಾನ್ಯ ವರ್ಗಾವಣೆಯಲ್ಲಿ ಈ ಶಾಲೆಗಳನ್ನು ಸ್ಥಳ ಆಯ್ಕೆ ಮಾಡಿಕೊಂಡು ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. ಸದರಿ ಶಾಲೆಗಳಲ್ಲಿ ಮುಖ್ಯ ಶಿಕ್ಷಕರ ಹುದ್ದೆ ಸೃಜನೆ / ಮಂಜೂರಾತಿ ಇಲ್ಲದ ಕಾರಣ ಶಿಕ್ಷಕರ ವೇತನ ಸೆಳೆಯಲು ಸಾಧ್ಯವಾಗದ ಕಾರಣ ಮುಖ್ಯ ಶಿಕ್ಷಕರ ಹುದ್ದೆ ಸೃಜನೆಯಾಗುವವರೆಗೆ ಲೆಕ್ಕಶೀರ್ಷಿಕೆ: 2202-00-102-0-62 ರಲ್ಲಿ ಸದರಿ ಶಿಕ್ಷಕರುಗಳಿಗೆ ವೇತನ ಸೆಳೆಯಲು ತಾತ್ಕಾಲಿಕವಾಗಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇವರಿಗೆ ವೇತನ ಬಟವಾಡೆ ಅಧಿಕಾರವನ್ನು ಪ್ರತ್ಯಾಯೋಜಿಸಿ ಆದೇಶ ಹೊರಡಿಸಲು ಕೋರಿರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, ಈ 15 ಉನ್ನತೀಕರಿಸಿದ ಸರ್ಕಾರಿ ಪ್ರೌಢಶಾಲೆಗಳಿಗೆ ಮುಖ್ಯ ಶಿಕ್ಷಕರ ಹುದ್ದೆ ಮಂಜೂರಾತಿ ಇಲ್ಲದ ಕಾರಣ ಮುಖ್ಯ ಶಿಕ್ಷಕರ ಹುದ್ದೆ ಮಂಜೂರಾತಿ ಆಗುವವರೆಗೂ ಸದರಿ ಪ್ರೌಢ ಶಾಲೆಗಳ ಶಿಕ್ಷಕರುಗಳ ವೇತನ ಸೆಳೆಯಲು ಸಂಬಂಧಿಸಿದ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ವೇತನ ಬಟವಾಡೆ ಅಧಿಕಾರಿಯನ್ನಾಗಿ ಕಾರ್ಯ ನಿರ್ವಹಿಸಲು ಅಧಿಕಾರವನ್ನು ಪ್ರತ್ಯಾಯೋಜಿಸಿ ಆದೇಶ ಹೊರಡಿಸಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ : ಇಪಿ 45 ಎಸ್‌ಓಹೆಚ್ 2026, ಬೆಂಗಳೂರು, ದಿನಾಂಕ: 12.05.2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶಾಲಾ ಮತ್ತು ಸಾಕ್ಷರತಾ ಇಲಾಖೆಯ 17 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಉನ್ನತೀಕರಿಸಿದ್ದು, ಸದರಿ 17 ಪ್ರೌಢ ಶಾಲೆಗಳಲ್ಲಿ ಈ ಆದೇಶಕ್ಕೆ ಲಗತ್ತಿಸಿರುವ **ಅನುಬಂಧ**ದಲ್ಲಿರುವ 15 ಪ್ರೌಢಶಾಲೆಗಳಿಗೆ ಮುಖ್ಯ ಶಿಕ್ಷಕರ

--2

ಹುದ್ದೆ ಮಂಜೂರಾತಿ ಇಲ್ಲದ ಕಾರಣ ಮುಖ್ಯ ಶಿಕ್ಷಕರ ಹುದ್ದೆ ಮಂಜೂರಾತಿ ಆಗುವವರೆಗೂ ವೇತನ ಸೆಳೆಯಲು ವೇತನ ಬಟವಾಡೆ ಅಧಿಕಾರಿವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಪ್ರತ್ಯಾಯೋಜಿಸಿ ಆದೇಶಿಸಿದೆ.

- 15 ಉನ್ನತೀಕರಿಸಿದ ಸರ್ಕಾರಿ ಪ್ರೌಢ ಶಾಲೆಗಳಿಗೆ ಮುಖ್ಯ ಶಿಕ್ಷಕರ ಹುದ್ದೆ ಮಂಜೂರಾತಿ ಇಲ್ಲದ ಕಾರಣ ಮುಖ್ಯ ಶಿಕ್ಷಕರ ಹುದ್ದೆ ಮಂಜೂರಾತಿ ಆಗುವವರೆಗೂ ಸದರಿ ಶಾಲೆಗಳ ಶಿಕ್ಷಕರುಗಳ ವೇತನ ಸೆಳೆಯಲು ಸಂಬಂಧಿಸಿದ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ವೇತನ ಬಟವಾಡೆ ಅಧಿಕಾರಿಯಾಗಿ ಕಾರ್ಯ ನಿರ್ವಹಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 564 ವೆಚ್ಚ-8/2024, ದಿನಾಂಕ:04.05.2026 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

12/5/26

**(ಎಸ್. ಪ್ರಕಾಶ)**
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

12/5

**ಇವರಿಗೆ :-**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ ರಾಜ್ಯ, ಬೆಂಗಳೂರು-560 001.
2. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಕೆ.ಆರ್.ಸರ್ಕಲ್, ಬೆಂಗಳೂರು.
4. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಉಡುಪಿ / ಬೆಂಗಳೂರು ಉತ್ತರ / ಬೆಂಗಳೂರು ದಕ್ಷಿಣ / ರಾಯಚೂರು / ಬೀದರ್ / ವಿಜಯಪುರ/ ಹಾವೇರಿ / ಬೆಳಗಾವಿ / ಬಾಗಲಕೋಟೆ ಜಿಲ್ಲೆ(ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮುಖಾಂತರ)
5. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರುಗಿ/ ಧಾರವಾಡ.
6. ನಿರ್ದೇಶಕರು (ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
7. ಉಪ ನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಉಡುಪಿ / ಬೆಂಗಳೂರು ಉತ್ತರ / ಬೆಂಗಳೂರು ದಕ್ಷಿಣ / ರಾಯಚೂರು / ಬೀದರ್ / ವಿಜಯಪುರ/ ಹಾವೇರಿ / ಬೆಳಗಾವಿ / ಬಾಗಲಕೋಟೆ ಜಿಲ್ಲೆ(ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮುಖಾಂತರ).
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-8), ವಿಧಾನಸೌಧ, ಬೆಂಗಳೂರು.
9. ಸಂಬಂಧಪಟ್ಟವರಿಗೆ (ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮುಖಾಂತರ).

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿವರ ಆಪ್ತ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
4. ಸರ್ಕಾರದ ವಿಶೇಷ ಕಾರ್ಯದರ್ಶಿ, ಇವರ ಆಪ್ತ ಸಹಾಯಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
5. ಸಮನ್ವಯಾಧಿಕಾರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು (ಮಾಹಿತಿ ಕೇಂದ್ರ).
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಸರ್ಕಾರದ ಆದೇಶ ಸಂಖ್ಯೆ : ಇಪಿ 45 ಎಸ್‌ಓಹೆಚ್ 2026, ಬೆಂಗಳೂರು, ದಿನಾಂಕ: 12.05.2026 ಕ್ಕೆ ಅನುಬಂಧ

| SL. No | Division | School Details | District | UDISE Code | School Name |
|---|---|---|---|---|---|
| 1 | BENGALURU AND MYSURU | ಹಿರಿಯ ಪ್ರಾಥಮಿಕ ಶಾಲೆಗಳು | UDUPI | 29160402509 | GOVT HIGHER PRIMARY SCHOOL METTINAHOLE |
| | | ಕೆ.ಪಿ.ಎಸ್ ಶಾಲೆಗಳು | BANGALURU NORTH | 29280201902 | GMPS CHIKKGOLLARAHATTI |
| | | ಉರ್ದು ಮಾಧ್ಯಮ ಪ್ರೌಢಶಾಲೆ | BANGALURU SOUTH | 29200319974 | GOVT URDU MODEL SCHOOL RK HEGGADENAGAR |
| 2 | KALBURGI | ಹಿರಿಯ ಪ್ರಾಥಮಿಕ ಶಾಲೆಗಳು | RAICHUR | 29060503602 | GOVT HIGHER PRIMARY SCHOOL CHATRA |
| | | ಕೆ.ಪಿ.ಎಸ್ ಶಾಲೆಗಳು | BIDAR | 29050108001 | GOVT MPS KAMALANAGAR |
| 3 | DHARWAD | ಹಿರಿಯ ಪ್ರಾಥಮಿಕ ಶಾಲೆಗಳು | VIJAYAPURA | 29031202101 | GOVT MPS BANKALAGI |
| | | | VIJAYAPURA | 29031202901 | GOVT KBHPS BORAGI |
| | | ಕೆ.ಪಿ.ಎಸ್ ಶಾಲೆಗಳು | HAVERI | 29110110002 | GOVT TALUKU MODEL EXT BYADAGI |
| | | | VIJAYAPURA | 29090301401 | GOVT KBHPPS BEERALADINNI |
| | | | VIJAYAPURA | 29031014901 | GOVT HPS YARZERI |
| | | | BELAGAVI | 29010200401 | K.H.P.S AVARADI |
| | | ಹಿರಿಯ ಪ್ರಾಥಮಿಕ ಶಾಲೆಗಳು | BELAGAVI | 29300708301 | K.H.PS SULTANPUR |
| | | | HAVERI | 29110704201 | GHPS KAN SCHOOL GUNDA GATTI |
| | | ಕೆ.ಪಿ.ಎಸ್ ಶಾಲೆಗಳು | BAGALKOTE | 29020201601 | GOVT-KB MODEL PRIMARY SCHOOL BOMMANAGI |
| | | | VIJAYAPURA | 29030807901 | GOVT KBHPS HIREMASALI |

12/5/26

**(ಎಸ್. ಪ್ರಕಾಶ)**
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

12/5